080 – 22870060 / 22873151 Extn: 203
Fax: 080-22875798 / 22876803
e-mail: dmekarnataka@yahoo.com

# ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ
# DIRECTORATE OF MEDICAL EDUCATION

ಆನಂದರಾವ್ ವೃತ್ತ, ಬೆಂಗಳೂರು
Anand Rao Circle, BANGALORE-560009

**No: DME/MCS/11/2018-19** **Date: 28-06-2018**

## ಸುತ್ತೋಲೆ

ವಿಷಯ:- ರಾಜ್ಯದ ಸರ್ಕಾರಿ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸ್ನಾತಕ ಕೋರ್ಸುಗಳ ಶುಲ್ಕ ಪರಿಷ್ಕರಣೆಯಾಗಿರುವ ಬಗ್ಗೆ.

ಉಲ್ಲೇಖ:- ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಆಕುಕ 168 ಆರ್‌ಜಿಯು 2018, ಬೆಂಗಳೂರು, ದಿನಾಂಕ: 26.06.2018.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದ ಸರ್ಕಾರಿ ಆದೇಶದಲ್ಲಿ 2018-19ನೇ ಸಾಲಿನಿಂದ ಸರ್ಕಾರಿ ವೈದ್ಯಕೀಯ ಕಾಲೇಜಿನ **ಎಂ.ಬಿ.ಬಿ.ಎಸ್** ಕೋರ್ಸ್‌ಗೆ ರೂ. 50,000/-ಗಳನ್ನು ಮತ್ತು ಸರ್ಕಾರಿ ದಂತ ವೈದ್ಯಕೀಯ ಕಾಲೇಜಿನ **ಬಿ.ಡಿ.ಎಸ್** ಕೋರ್ಸ್‌ಗೆ ರೂ.40,000/-ಗಳ ಶುಲ್ಕವನ್ನು ಪರಿಷ್ಕರಣೆ ಮಾಡಿ ಸರ್ಕಾರವು ನಿಗಧಿಪಡಿಸಿರುತ್ತದೆ. (ಪ್ರತಿಯನ್ನು ಲಗತ್ತಿಸಿದೆ)

ಅದರಂತೆ 2018-19ನೇ ಸಾಲಿನಿಂದ ಸರ್ಕಾರಿ ವೈದ್ಯಕೀಯ ಕಾಲೇಜಿನ ಎಂ.ಬಿ.ಬಿ.ಎಸ್ ಕೋರ್ಸ್‌ಗೆ ರೂ.50,000/-ಗಳನ್ನು ಮತ್ತು ಸರ್ಕಾರಿ ದಂತ ವೈದ್ಯಕೀಯ ಕಾಲೇಜಿನ ಬಿ.ಡಿ.ಎಸ್ ಕೋರ್ಸ್‌ಗೆ ರೂ.40,000/-ಗಳ ಶುಲ್ಕವನ್ನು ಅಖಿಲಭಾರತ ಕೋಟಾದಡಿಯಲ್ಲಿ ಪ್ರವೇಶ ಹೊಂದುವ ಮತ್ತು ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಪ್ರವೇಶ ಹೊಂದುವ ವಿದ್ಯಾರ್ಥಿಗಳಿಂದ ಮೇಲ್ಕಂಡ ದರಗಳಂತೆ ಶುಲ್ಕವನ್ನು ಪಡೆದುಕೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ.

28/6/18
ವೈದ್ಯಕೀಯ ಶಿಕ್ಷಣ ನಿರ್ದೇಶಕರು.

**ಪ್ರತಿಯನ್ನು**

ನಿರ್ದೇಶಕರು, ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜು ಮತ್ತು ದಂತ ವೈದ್ಯಕೀಯ ಕಾಲೇಜು, ಕರ್ನಾಟಕ ರವರುಗಳಿಗೆ ಮಾಹಿತಿಗಾಗಿ ಸಲ್ಲಿಸಲಾಗಿದೆ.

ನಿರ್ದೇಶಕರು, ಕರ್ನಾಟಕ ಪರೀಕ್ಷಾ ಪ್ರಾಧಿಕಾರ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.

ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.